# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು - 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ : ಶೈವಿ : 2020–21: 1226

ದಿನಾಂಕ: 18.08.2020

## ಸುತ್ತೋಲೆ

**ವಿಷಯ:** ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳ 2020-21ನೇ ಶೈಕ್ಷಣಿಕ ಸಾಲಿನ ತರಗತಿಗಳನ್ನು ಆನ್‌ಲೈನ್ ಮೂಲಕ ಪ್ರಾರಂಭಿಸುವ ಕುರಿತು.

**ಉಲ್ಲೇಖ:** (1) ಸರ್ಕಾರದ ಪತ್ರ ಸಂಖ್ಯೆಇಡಿ/197/ಯುಎನ್ಇ/2020, ಬೆಂಗಳೂರು ದಿನಾಂಕ: 10.07.2020.

(2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ. 18.08.2020 (ಕಂಡಿಕೆ–82)

* * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ 2020-21ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ಸೆಪ್ಟಂಬರ್ 01 ರಿಂದ ಆನ್‌ಲೈನ್ ಮೂಲಕ ಪ್ರಾರಂಭಿಸಲು ನಿರ್ಧರಿಸಿರುವ ಹಿನ್ನೆಲೆಯಲ್ಲಿ, 3ನೇ ಸೆಮಿಸ್ಟರ್‌ನ ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ 1, 3 ಮತ್ತು 5ನೇ ಸೆಮಿಸ್ಟರ್‌ನ ಸ್ನಾತಕ ವಿದ್ಯಾರ್ಥಿಗಳಿಗೆ ಪ್ರಸ್ತುತ ಕಾಲೇಜುಗಳಲ್ಲಿ/ವಿಭಾಗಗಳಲ್ಲಿ ಲಭ್ಯವಿರುವ ಅಧ್ಯಾಪಕರುಗಳನ್ನು ಬಳಸಿಕೊಂಡು ಸೆಪ್ಟಂಬರ್ 01 ರಿಂದ ಆನ್‌ಲೈನ್ ಮುಖಾಂತರ ತರಗತಿಗಳನ್ನು ಪ್ರಾರಂಭಿಸಲು ತಿಳಿಸಲಾಗಿದೆ. ಈ ಸಂಬಂಧ, ಆನ್‌ಲೈನ್ ತರಗತಿಗಳನ್ನು ತೆಗೆದುಕೊಳ್ಳಲು ತರಗತಿ ವೇಳಾಪಟ್ಟಿಯನ್ನು ಹಾಗೂ ಇನ್ನಿತರೆ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ತಿಳಿಸಿದೆ.

ಸರ್ಕಾರ ಅಥವಾ ಯುಜಿಸಿಯಿಂದ ನಿರ್ದೇಶನ ಬಂದ ನಂತರ 2020-21ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸಬಹುದಾಗಿದೆ. ಅಲ್ಲಿಯವರೆಗೆ ಆನ್‌ಲೈನ್ ಮೂಲಕ ತರಗತಿಗಳನ್ನು ನಡೆಸುವ ಸಲುವಾಗಿ **ದಿನಾಂಕ.26.08.2020ರಂದು ಬೆಳಿಗ್ಗೆ 10.30ಕ್ಕೆ ವಿಶ್ವೇಶ್ವರಯ್ಯ ಸಭಾಂಗಣ, ತುಮಕೂರು ವಿ.ವಿ ಇಲ್ಲಿ ಎಲ್ಲಾ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು/ಸಂಯೋಜಕರು ಮತ್ತು ಘಟಕ ಕಾಲೇಜುಗಳ ಪ್ರಾಂಶುಪಾಲರುಗಳ ಸಭೆಯನ್ನು** ಏರ್ಪಡಿಸಲಾಗಿದ್ದು, ತಪ್ಪದೆ ಸಭೆಯಲ್ಲಿ ಭಾಗವಹಿಸುವಂತೆ ತಿಳಿಸಲು ಮಾನ್ಯ ಕುಲಪತಿಯವರಿಂದ ನಿರ್ದೇಶಿತವಾಗಿದ್ದೇನೆ.

ಸೂಚನೆ: ಸಭೆಯಲ್ಲಿ ಭಾಗವಹಿಸುವಾಗ ಕೋವಿಡ್-19 ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

18/8

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ

ಗೆ:

1) ಮುಖ್ಯಸ್ಥರು/ಸಂಯೋಜಕರು ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2) ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ /ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3) ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳು

**ಪ್ರತಿಗಳು:**

1) ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2) ನಿರ್ದೇಶಕರು, ಐ.ಕ್ಯು.ಎ.ಸಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.- ಮಾಹಿತಿಗಾಗಿ
3) ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4) ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
5) ಕಚೇರಿ ಪ್ರತಿ

d:\lakshmikanth\kannada letters 2020-21.docx